ಅರಣ್ಯ ಪ್ರದೇಶಗಳ ಒತ್ತುವರಿ

594 (189) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಂಡೀಪುರ ಅಭಯಾರಣ್ಯದಲ್ಲಿ ಜಂಗಲ್ ಲಾಡ್ಜ್ ಮತ್ತು ರೆಸಾರ್ಟ್ (ಲಿ)., ವತಿಯಿಂದ ನೌಕರರಿಗೆ ವಸತಿಗೃಹಗಳನ್ನು ನಿರ್ಮಿಸಲಾಗುತ್ತಿದೆಯೇ;

ಆ) ಅದರಿಂದ ಪರಿಸರಕ್ಕೆ ಧಕ್ಕೆಯುಂಟಾಗುವುದಿಲ್ಲವೆ;

ಇ) ಅಭಯಾರಣ್ಯ ಪ್ರದೇಶದಲ್ಲಿ ವಸತಿ ಗೃಹಗಳನ್ನು ನಿರ್ಮಿಸುವುದನ್ನು ನಿಷೇಧಿಸಲಾಗಿದೆಯೇ?

ಶ್ರೀ ಸಿ.ಪಿ. ಯೋಗೇಶ್ವರ್ (ಅರಣ್ಯ ಸಚಿವರು) :

ಅ) ಬಂಡೀಪುರ ಅಭಯಾರಣ್ಯದಲ್ಲಿ ಮೇ: ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ಸ್ (ಲಿ)., ವತಿಯಿಂದ ನೌಕರರಿಗೆ ಯಾವುದೇ ವಸತಿ ಗೃಹಗಳನ್ನು ನಿರ್ಮಿಸಲಾಗುತ್ತಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಹೌದು, ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972 ರನ್ವಯ ರಕ್ಷಿತ ಪ್ರದೇಶಗಳಲ್ಲಿ ಯಾವುದೇ ಅರಣ್ಯೇತರ ಚಟುವಟಿಕೆಗಳಿಗೆ ಅವಕಾಶ ವಿರುವುದಿಲ್ಲ.

ಜಕ್ಕಲಮಡಗು ಜಲಾಶಯ

536 (797) ಶ್ರೀ ಬಚ್ಚೇಗೌಡ ಕೆ.ಪಿ (ಚಿಕ್ಕಬಳ್ಳಾಪುರ) : ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಜಕ್ಕಲಮಡಗು ಎಂಬ ಜಲಾಶಯವನ್ನು ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಜಲಾಶಯ ನಿರ್ಮಾಣದ ಕಾಮಗಾರಿ ಯಾವ ಹಂತದಲ್ಲಿದೆ;

ಇ) ಜಲಾಶಯದಲ್ಲಿ ಹೂಳು ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಜಲಾಶಯದಲ್ಲಿ ತುಂಬಿರುವ ಹೂಳನ್ನು ತೆಗೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಉ) ಹೂಳು ತೆಗೆಯುವ ಕಾರ್ಯವನ್ನು ಯಾವಾಗ ಪ್ರಾರಂಭಿಸ ಲಾಗುವುದು?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಬಂದಿದೆ.

ಆ) ಕಾಮಗಾರಿ ಪ್ರಗತಿಯಲ್ಲಿರುವುದು, ಶೇಕಡಾ 85ರಷ್ಟು ಭೌತಿಕ ಪ್ರಗತಿ ಪೂರ್ಣಗೊಂಡಿರುತ್ತದೆ.

ಇ) ಬಂದಿದೆ.

ಈ) ಚಿಕ್ಕಬಳ್ಳಾಪುರ ಮತ್ತು ದೊಡ್ಡಬಳ್ಳಾಪುರ ನಗರಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ನಿರ್ಮಿಸುತ್ತಿರುವ ಜಕ್ಕಲಮಡಗು ಜಲಾಶಯದ ನಿರ್ಮಾಣ ಮಾಡುವ ಕಾಮಗಾರಿಯಡಿ ವಹಿಸಿಕೊಟ್ಟಿರುವ ಗುತ್ತಿಗೆಯಲ್ಲಿ ಸುಮಾರು 2,78,090 ಕ್ಯೂಬಿಕ್ ಮೀಟರ್‌ನಷ್ಟು ಹೂಳು ತೆಗೆಯಲು ಅವಕಾಶವಿದ್ದು, 2,50,000 ಕ್ಯೂಬಿಕ್ ಮೀಟರ್‌ನಷ್ಟು ಹೂಳನ್ನು ಈಗಾಗಲೇ ತೆಗೆಯಲಾಗಿದ್ದು, ಬಾಕಿ ಉಳಿದ ಹೂಳನ್ನು ತೆಗೆಯುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಉ) ಹೂಳು ತೆಗೆಯುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಅಂತರ್ಜಲ ಮಟ್ಟವನ್ನು ಹೆಚ್ಚಿಸುವುದು

926 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ಮತ್ತು ಯಾವುವು (ತಾಲ್ಲೂಕುವಾರು ವಿವರಗಳನ್ನು ನೀಡುವುದು);